## 34. ಸೋಂಕು ಕಡಿವಾಣಕ್ಕೆ ಸಿಎಂ ಟಾರ್ಗೆಟ್

ನಗರದಲ್ಲಿ ಕೋವಿಡ್ ನಿಯಂತ್ರಣ ಸಂಬಂಧ ಪ್ರತಿವಾರ ತಮಗೆ ವರದಿ ಸಲ್ಲಿಸಬೇಕು. ಟೆಸ್ಟಿಂಗ್ ಪ್ರಮಾಣ ಹೆಚ್ಚಿಸಬೇಕು ಎಂದು ವಲಯ ಉಸ್ತುವಾರಿ ಸಚಿವರು ಹಾಗೂ ಅಧಿಕಾರಿಗಳಿಗೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಈ ಮೂಲಕ ರಾಜಧಾನಿಯಲ್ಲಿ ಕೋವಿಡ್ ನಿಯಂತ್ರಣಕ್ಕೆ ಟಾರ್ಗೆಟ್ ನೀಡಿರುವ ಸಿಎಂ, ಇದರಲ್ಲಿ ವೈಫಲ್ಯ ಕಂಡರೆ ಕ್ರಮ ಕೈಗೊಳ್ಳುವ ಎಚ್ಚರಿಕೆಯನ್ನು ರವಾನಿಸಿದ್ದಾರೆ. ಈ ಸಂಬಂಧ ರಾಜರಾಜೇಶ್ವರಿ ನಗರ, ದಾಸರಹಳ್ಳಿ, ಬೊಮ್ಮನಹಳ್ಳಿ ಹಾಗೂ ಮಹದೇವಪುರ ವಲಯಗಳ ಉಸ್ತುವಾರಿ ಸಚಿವರು ಹಾಗೂ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ತಮಗೆ ವಹಿಸಲಾದ ವಲಯದಲ್ಲಿ ಸಚಿವರು ಮುತುವರ್ಜಿ ವಹಿಸಬೇಕು. ಯಾವುದೇ ಲೋಪಕ್ಕೆ ಆಸ್ಪದ ನೀಡಕೂಡದು. ಸಬೂಬು ಹೇಳಲೂಬಾರದು. ನಿತ್ಯ ಸಂಜೆ ಈ ಸಂಬಂಧದ ವರದಿಯನ್ನು ಅಧಿಕಾರಿಗಳು ಉಸ್ತುವಾರಿ ಸಚಿವರಿಗೆ ನೀಡಬೇಕು. ಸಚಿವರು ಕ್ರೋಢೀಕೃತ ವರದಿಯನ್ನು ವಾರಕ್ಕೊಮ್ಮೆ ತಪ್ಪದೇ ನನಗೆ ನೀಡಬೇಕು ಎಂಬ ನಿರ್ದೇಶನ ಕೊಟ್ಟರು.

**ಪ್ರಮುಖಾಂಶ:**

- ಕೋವಿಡ್ ನಿಯಂತ್ರಣ ಹಾಗೂ ಸಕಾಲದಲ್ಲಿ ಚಿಕಿತ್ಸೆ ದೊರಕಿಸಲು ಅಧಿಕಾರಿಗಳು ಹೆಚ್ಚು ಗಮನ ಹರಿಸುವುದು.
- ಹೆಚ್ಚಿನ ಸಂಖ್ಯೆಯಲ್ಲಿ ಪರೀಕ್ಷೆ ನಡೆಸುವುದು, ಸೋಂಕಿತರ ಸಂಪರ್ಕ ಹೊಂದಿದವರನ್ನು ಪತ್ತೆ ಹಚ್ಚುವುದು ಮತ್ತು ಕಂಟೈನ್ಮೆಂಟ್ ಝೋನ್‌ನಲ್ಲಿ ನಿಯಮಗಳ ಕಟ್ಟುನಿಟ್ಟಿನ ಪಾಲನೆ.
- ಪರೀಕ್ಷೆ ಫಲಿತಾಂಶವನ್ನು ತ್ವರಿತವಾಗಿ ಅದರಲ್ಲೂ ಚಿಕಿತ್ಸೆ ಅಗತ್ಯವಿರುವವರಿಗೆ ಬೇಗನೆ ಫಲಿತಾಂಶ ದೊರೆಯುವಂತೆ ಕ್ರಮ ಕೈಗೊಳ್ಳುವುದು.
- ರೋಗಲಕ್ಷಣ ಇಲ್ಲದ, ಇತರ ಯಾವುದೇ ಕಾಯಿಲೆಗಳಿಂದ ವ್ಯಕ್ತಿಗಳನ್ನು ಆಸ್ಪತ್ರೆಗೆ ದಾಖಲಿಸಿ ಅನಗತ್ಯ ದಟ್ಟಣೆ ಉಂಟು ಮಾಡಕೂಡದು.
- ಪರೀಕ್ಷೆಯಲ್ಲಿ ಒಬ್ಬ ವ್ಯಕ್ತಿಗೆ ಸೋಂಕು ದೃಢಪಟ್ಟಲ್ಲಿ ಕೂಡಲೇ ಅವರನ್ನು ಆಸ್ಪತ್ರೆಗೆ ಅಥವಾ ಕೋವಿಡ್ ಕೇರ್ ಸೆಂಟರ್‌ಗೆ ವರ್ಗಾಯಿಸಲು ಕ್ರಮ ವಹಿಸುವುದು.
- ಸಂಪರ್ಕಿತರು ಕ್ವಾರಂಟೈನ್ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದನ್ನು ಖಾತರಿ ಪಡಿಸಿಕೊಳ್ಳುವುದು.
- ಕೋವಿಡ್ ಆಸ್ಪತ್ರೆಗಳ ನಿರ್ವಹಣೆ, ಆಹಾರ ಪೂರೈಕೆ, ಸ್ವಚ್ಛತೆ, ಚಿಕಿತ್ಸೆ ಮೊದಲಾದ ವಿಷಯಗಳ ಕುರಿತು ಹೆಚ್ಚಿನ ಗಮನ ಕೊಡುವುದು.
- ಯಾವುದೇ ದೂರು ಬಂದರೆ ತಕ್ಷಣ ಸ್ಪಂದಿಸುವುದು.
- ಸೋಂಕಿತರು ಯಾವುದೇ ಆಸ್ಪತ್ರೆಗೆ ಬಂದರೂ ಮೊದಲು ಅವರನ್ನು ದಾಖಲಿಸಿಕೊಂಡು ಪ್ರಾಥಮಿಕ ಚಿಕಿತ್ಸೆ ನೀಡುವುದು.
- ಲೋಪದೋಷ ಗಮನಕ್ಕೆ ಬಂದ ಕೂಡಲೇ ಸರಿಪಡಿಸುವ ಕೆಲಸವನ್ನು ವಲಯಗಳಿಗೆ ಸಂಬಂಧಪಟ್ಟ ಸಚಿವರು ಹಾಗೂ ಅಧಿಕಾರಿಗಳು ಮಾಡಬೇಕು.
- ಈಗಾಗಲೇ ಹಾಸಿಗೆ ಹಂಚಿಕೆಗೆ ಪಾರದರ್ಶಕ ಕೇಂದ್ರೀಕೃತ ವ್ಯವಸ್ಥೆ ಮಾಡಲಾಗಿದೆ. ಸಹಾಯವಾಣಿಗಳನ್ನೂ ಸಹ ಸ್ಥಾಪಿಸಲಾಗಿದೆ.

- ಸೋಂಕಿತರು ಯಾವ ವಿಷಯಕ್ಕೆ ಯಾವ ಸಹಾಯವಾಣಿಗೆ ಕರೆಮಾಡಬೇಕು ಎಂಬುದನ್ನು ಜಾಹೀರಾತು ನೀಡಬೇಕು.

- ಕೋವಿಡ್ ಸೋಂಕು ತಗುಲಿರುವುದು ದೃಢಪಟ್ಟ ಕೂಡಲೇ ಆ್ಯಂಬುಲೆನ್ಸ್ ಕಳುಹಿಸಬೇಕು. ವಿಳಂಬವಾದಲ್ಲಿ ಅಥವಾ ಸೋಂಕಿತರನ್ನು ಆಸ್ಪತ್ರೆಗೆ ದಾಖಲಿಸಲು ವಿನಾಕಾರಣ ನಿರಾಕರಿಸಿದಲ್ಲಿ ಅಧಿಕಾರಿಗಳು ನಿಯಾಮಾನುಸಾರ ಕೂಡಲೇ ಕ್ರಮ ಕೈಗೊಳ್ಳಬೇಕು.

- ವಲಯಗಳಲ್ಲಿ ಕೋವಿಡ್ ನಿಯಂತ್ರಣಕ್ಕೆ ಆದ್ಯತೆ ನೀಡಬೇಕು. ಕೋವಿಡ್ ಆಸ್ಪತ್ರೆಗಳಿಗೆ ಭೇಟಿ ನೀಡಿ, ಅಲ್ಲಿನ ವ್ಯವಸ್ಥೆಗಳು ಸರಿಯಿದೆಯೇ ಎಂದು ಪರಿಶೀಲಿಸಬೇಕು.

- ಹೆಚ್ಚು ಸಂಖ್ಯೆಯಲ್ಲಿ ಟೆಸ್ಟ್ ಮಾಡಿ 24 ಗಂಟೆಯ ಒಳಗೆ ವರದಿ ಬರುವಂತೆ ಮಾಡಬೇಕು.

- ವಾರ್ಡ್‌ಗಳಲ್ಲಿ ಕೋವಿಡ್ ಬಗ್ಗೆ ಮಾಹಿತಿ ನೀಡುವ ಜಾಹೀರಾತು ಫಲಕಗಳನ್ನು ಅಳವಡಿಸುವುದು.

**5ಟಿ ಪಾಲಿಸಿ :** ಎಲ್ಲ ವಲಯಗಳಲ್ಲೂ 5ಟಿ ಸ್ಟ್ರಾಟಜಿಯನ್ನು (ಟ್ರೇಸ್, ಟ್ರ್ಯಾಕ್, ಟೆಸ್ಟ್, ಟ್ರೀಟ್, ಟೆಕ್ನಾಲಜಿ) ಕಟ್ಟುನಿಟ್ಟಾಗಿ ಪಾಲಿಸಬೇಕು. ಕೋವಿಡ್ ನಿರ್ವಹಣೆಯಿಂದ ತಪ್ಪಿಸಿಕೊಳ್ಳಲು ನೆಪಹೇಳುವ ಅಧಿಕಾರಿಗಳ ವಿರುದ್ಧ ಮುಲಾಜಿಲ್ಲದೆ ಕ್ರಮ ಕೈಗೊಳ್ಳಬೇಕು. ಕುಂಟುನೆಪ ಹೇಳುವವರನ್ನು ತಕ್ಷಣ ಸಸ್ಪೆಂಡ್ ಮಾಡಬೇಕು" ಎಂದು ಸೂಚಿಸಿದರು.

ಆಧಾರ:ವಿಜಯಕರ್ನಾಟಕ, ದಿನಾಂಕ:23.07.2020